# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಚಿದಾನಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/MYS-930/2014/DRE-4, ದಿನಾಂಕ: 16.02.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 27.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಅಣ್ಣಯ್ಯ ಬಿನ್ ಸಿದ್ದಯ್ಯ, ಅರಕೆರೆ, ಕೆ.ಆರ್. ತಾಲ್ಲೂಕು, ಮೈಸೂರು ಜಿಲ್ಲೆ ರವರು ಸರ್ಕಾರಿ/ಸಾರ್ವಜನಿಕ ನೌಕರರಾದ ಶ್ರೀ. ಚಿದಾನಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರ ವಿರುದ್ಧ ಸಾರ್ವಜನಿಕ ಪಾರ್ಕ್‌ಗೆ ಮೀಸಲಿಟ್ಟಿದ್ದ ಜಾಗವನ್ನು ಮಾರ್ಪಡಿಸಿ, ನಿವೇಶನವೆಂದು ಖಾತೆ ಮಾಡಿಕೊಟ್ಟು ಕ್ರಯವಾಗಿರುತ್ತದೆ. ಪಂಚಾಯಿತಿಯ ಮಾಸಿಕ ಸಭೆಯಲ್ಲಿ ತೀರ್ಮಾನ ಆಗದೇ, ತೀರ್ಮಾನ ಆಗಿದೆ ಎಂದು ಖಾತೆ ಮಾಡಿ ಅಕ್ರಮವೆಸಗಿರುತ್ತಾರೆಂದ ಸಲ್ಲಿಸಿದ ದೂರಿನ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

ದೂರುದಾರರ ದೂರಿಗೆ ಸಂಬಂಧಿಸಿದಂತೆ, ಎದುರುದಾರರಾದ ಪಂ.ಅ.ಅ.ಗಳು, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರು ದಿ: 07/08/2014 ರಂದು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ. ಸದರಿ ಆಕ್ಷೇಪಣೆಯಲ್ಲಿ, ಮಾಡಿದ್ದ ಅಕ್ರಮ ಪರಭಾರೆಯನ್ನು ಪರಸ್ಪರ ರದ್ದುಗೊಳಿಸಿರುತ್ತಾರೆ ಹಾಗೂ ಅಕ್ರಮವಾಗಿ ನೀಡಿರುವ ನಾಗರೀಕ ಸೌಲಭ್ಯ ನಿವೇಶನವನ್ನು ನಗರ ಯೋಜನಾ ಪ್ರಾಧಿಕಾರ, ಕೆ.ಆರ್.ನಗರ ರವರಿಗೆ ಪರಿತ್ಯಾಜನಾ ಪತ್ರದ ಮೂಲಕ ನೋಂದಣಿ ಮಾಡಿಸಿಕೊಟ್ಟಿರುತ್ತಾರೆಂದು ತಿಳಿಸಿರುತ್ತಾರೆ.

ದಿ: 27/09/2014 ರಂದು ದೂರುದಾರರು ತಮ್ಮ ಪ್ರತ್ಯುತ್ತರವನ್ನು ಸಲ್ಲಿಸಿರುತ್ತಾರೆ. ಸದರಿ ಪ್ರತ್ಯುತ್ತರದಲ್ಲಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಯನ್ನು ಅಲ್ಲಗಳೆಯುತ್ತಾ, ದೂರಿನಲ್ಲಿನ ಅಂಶಗಳನ್ನೇ ಪುನರಾವರ್ತನೆ ಮಾಡಿರುತ್ತಾರೆ.

ದೂರಿನಲ್ಲಿ ಇರುವ ಆಪಾದನೆಗಳು, ಎದುರುದಾರರ ಆಕ್ಷೇಪಣೆ ಹಾಗೂ ಪ್ರತ್ಯುತ್ತರವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ ಎದುರುದಾರರು ಈ ಕೆಳಕಂಡಂತೆ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

- ಕಾಳೇನಹಳ್ಳಿ ಗ್ರಾಮದ ಸರ್ವೆ ನಂ. 174/3 ರಲ್ಲಿ 1.16 ಗುಂಟೆ ಮತ್ತು ಸರ್ವೆ ನಂ. 174/6 ರಲ್ಲಿ 0.10 ಗುಂಟೆ ಒಟ್ಟು 1.26 ಗುಂಟೆ ಜಮೀನಿನಲ್ಲಿ ಪುಷ್ಪಲತಾ ಕೋಂ ಸಿ.ವಿ.ರಮೇಶ್‌ಕುಮಾರ್ ರವರು ನಿವೇಶನ ರಚಿಸಿದ್ದು, ಟೌನ್ ಪ್ಲಾನ್‌ನಲ್ಲಿ 34 ನಿವೇಶನಗಳನ್ನು ಅನುಮೋದಿಸಲಾಗಿರುತ್ತದೆ.
- ಸದರಿ 34 ನಿವೇಶನಗಳಲ್ಲದೇ, ನಾಗರೀಕ ಸೌಲಭ್ಯಕ್ಕೆಂದು ಮೀಸಲಿಟ್ಟಿರುವ ನಿವೇಶನವನ್ನು 35 ಮತ್ತು 36 ಎಂದು ನಮೂದಿಸಿರುತ್ತಾರೆ.
- ಸದರಿ ನಾಗರೀಕ ಸೌಲಭ್ಯಕ್ಕೆಂದು ಮೀಸಲಿಟ್ಟಿರುವ ನಿವೇಶನವನ್ನು ಸಾರ್ವಜನಿಕ ನಿವೇಶನ ಎಂದು ನೋಂದಣಿ ಮಾಡಬೇಕಾಗಿರುವುದು ಎದುರುದಾರರ ಆದ್ಯ ಕರ್ತವ್ಯವಾಗಿರುತ್ತದೆ.
- ಆದರೆ, ಎದುರುದಾರರು ಕಾನೂನು ಬಾಹಿರವಾಗಿ ನಿವೇಶನ/ಪಾರ್ಕ್ ಗೆಂದು ಮೀಸಲಿಟ್ಟಿರುವ ನಿವೇಶನವನ್ನು ನಿವೇಶನ ಸಂಖ್ಯೆ: 35 ಮತ್ತು 36 ಎಂದು ಪರಿವರ್ತಿಸಿ ದಿ: 03/07/2013 ಮತ್ತು 17/10/2013 ರಂದು ಶ್ರೀ ಮಂಜುನಾಥ್ ಪಿ ಬಿನ್ ಪಾಪಯ್ಯ ರವರಿಗೆ ಹಾಗೂ ಶ್ರೀ ರವಿ ಬಿನ್ ಸಣ್ಣಪ್ಪ ರವರಿಗೆ ಕ್ರಮವಾಗಿ ಕ್ರಯ ಪತ್ರದ ಮೂಲಕ ನೋಂದಣಿ ಮಾಡಿಕೊಟ್ಟು ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡಾಗ, ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆ ಇಲ್ಲದೆ, ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ. ಚಿದಾನಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ,ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1) (ii) ಮತ್ತು (iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/149/ಗ್ರಾಪಂಕಾ/2017 ಬೆಂಗಳೂರು, ದಿನಾಂಕ– 20–03–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಚಿದಾನಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಪುಟ ಸಂಖ್ಯೆ 01 ರಿಂದ 91 ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀ. ಚಿದಾನಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡೇಕೊಪ್ಪಲು (ಡೋರ್ನಹಳ್ಳಿ) ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ
7. ಗಣಕ ಕೋಶ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.